# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 355 |
| ಸದಸ್ಯರ ಹೆಸರು | ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 29.01.2026 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಕಳೆದ 3 ವರ್ಷಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಮಾಹಿತಿಯನ್ನು ಪ್ರಸಾರ ಮಾಡುವ ಮತ್ತು ವೈಜ್ಞಾನಿಕ ಅರಿವನ್ನು ಮೂಡಿಸುವ ನಿಟ್ಟಿನಲ್ಲಿ ಎಷ್ಟು ಕಾರ್ಯಕ್ರಮಗಳನ್ನು ಆಯೋಜಿಸಿರುತ್ತದೆ; (ಪೂರ್ಣ ಮಾಹಿತಿಯನ್ನು ಒದಗಿಸುವುದು) | ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಕಳೆದ 3 ವರ್ಷಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಮಾಹಿತಿಯನ್ನು ಪ್ರಸಾರ ಮಾಡುವ ಮತ್ತು ವೈಜ್ಞಾನಿಕ ಅರಿವನ್ನು ಮೂಡಿಸುವ ನಿಟ್ಟಿನಲ್ಲಿ ಆಯೋಜಿಸಲಾಗಿರುವ ಕಾರ್ಯಕ್ರಮಗಳ ವಿವರವನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ. |
| ಆ) | ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಕೇಂದ್ರ ಸರ್ಕಾರ ಕಳೆದ 10 ವರ್ಷಗಳಲ್ಲಿ ನೀಡಿರುವ ಅನುದಾನ ಎಷ್ಟು; ಬಿಡುಗಡೆಗೆ ಬಾಕಿ ಇರುವ ಅನುದಾನಗಳೆಷ್ಟು; (ಪೂರ್ಣ ವಿವರಗಳನ್ನು ಒದಗಿಸುವುದು) | ಕೇಂದ್ರ ಸರ್ಕಾರದಿಂದ ಕಳೆದ 10 ವರ್ಷಗಳಲ್ಲಿ ಪಿಲಿಕುಳ ಪ್ರಾದೇಶಿಕ ವಿಜ್ಞಾನ ಕೇಂದ್ರದಲ್ಲಿ ಇನೋವೇಷನ್ ಹಬ್ ಸ್ಥಾಪನೆಗೆ ಮತ್ತು ನಿರ್ವಹಣೆಗಾಗಿ ಈ ಕೆಳಕಂಡಂತೆ ಅನುದಾನ ನೀಡಲಾಗಿದೆ. |

**(ರೂ. ಲಕ್ಷಗಳಲ್ಲಿ)**

| ಕ್ರ. ಸಂ. | ವಿವರ | ಮೊತ್ತ |
|---|---|---|
| 1 | ಇನೋವೇಷನ್ ಹಬ್ ಸ್ಥಾಪನೆಗೆ | 90.00 |
| 2 | 2024-25ನೇ ಸಾಲಿನಲ್ಲಿ ಇನೋವೇಷನ್ ಹಬ್ ನಿರ್ವಹಣೆಗೆ ಬಿಡುಗಡೆಯಾಗಿರುವ ಅನುದಾನ. | 10.00 |
| 3 | 2025-26ನೇ ಸಾಲಿನಲ್ಲಿ ಇನೋವೇಷನ್ ಹಬ್ ನಿರ್ವಹಣೆಗಾಗಿ ಬಾಕಿ ಇರುವ ಅನುದಾನ. | 10.00 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಮಂಗಳೂರು ಬಳಿ ಇರುವ ಪಿಲಿಕುಳ ನಿಸರ್ಗಧಾಮದಲ್ಲಿ ಇರುವ ಸ್ವಾಮಿ ವಿವೇಕಾನಂದ ತಾರಾಲಯಕ್ಕೆ ಇಲ್ಲಿಯವರೆಗೆ ಎಷ್ಟು ವಿದ್ಯಾರ್ಥಿಗಳು ಭೇಟಿ ನೀಡಿ ವೀಕ್ಷಣೆ ಮಾಡಿರುತ್ತಾರೆ; ಈ ತಾರಾಲಯಕ್ಕೆ ಶೈಕ್ಷಣಿಕ ಪ್ರವಾಸ ಮಾಡುವ ವಿದ್ಯಾರ್ಥಿಗಳಿಗೆ ಮತ್ತು ಶೈಕ್ಷಣಿಕ ಸಂಸ್ಥೆಗಳಿಗೆ ಸರ್ಕಾರ ಯಾವ | ಸ್ವಾಮಿ ವಿವೇಕಾನಂದ ತಾರಾಲಯಕ್ಕೆ ಇಲ್ಲಿಯವರೆಗೆ ಒಟ್ಟು 3,91,183 ವಿದ್ಯಾರ್ಥಿಗಳು ಭೇಟಿ ನೀಡಿ ವೀಕ್ಷಣೆ ಮಾಡಿರುತ್ತಾರೆ. ಈ ತಾರಾಲಯಕ್ಕೆ ಶೈಕ್ಷಣಿಕ ಪ್ರವಾಸ ಮಾಡುವ ವಿದ್ಯಾರ್ಥಿಗಳಿಗೆ ಮತ್ತು ಶೈಕ್ಷಣಿಕ ಸಂಸ್ಥೆಗಳಿಗೆ ಶೇ.50 ರಷ್ಟು ರಿಯಾಯಿತಿ ದರದಲ್ಲಿ ಪ್ರವೇಶ ಶುಲ್ಕವನ್ನು ನಿಗಧಿಪಡಿಸಿ ಉತ್ತೇಜನ ನೀಡಲಾಗುತ್ತಿದೆ. |

<table>
<tr><td></td><td>ರೀತಿಯ ಉತ್ತೇಜನ ನೀಡುತ್ತಿದೆ:</td><td></td></tr>
<tr><td>ಈ)</td><td>ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಡಿಯಲ್ಲಿ ರಾಜ್ಯದಲ್ಲಿ ಎಷ್ಟು ತಾರಾಲಯಗಳು ಇರುತ್ತವೆ: ಇವುಗಳಿಗೆ ಪ್ರತಿ ವರ್ಷ ರಾಜ್ಯ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು: (ವಿವರಗಳನ್ನು ಒದಗಿಸುವುದು)</td><td>ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಡಿಯಲ್ಲಿ ಒಟ್ಟು 03 ತಾರಾಲಯಗಳು ಕಾರ್ಯನಿರ್ವಹಿಸುತ್ತಿವೆ.<br><br>ರಾಜ್ಯ ಸರ್ಕಾರವು ಪ್ರತಿ ವರ್ಷ ಅನುದಾನದ ಲಭ್ಯತೆಯ ಆಧಾರದ ಮೇಲೆ ಸದರಿ ತಾರಾಲಯಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ.<br><br>ಪ್ರಸಕ್ತ ಸಾಲಿನಲ್ಲಿ ನೀಡಿರುವ ಅನುದಾನದ ವಿವರ ಈ ಕೆಳಕಂಡಂತಿದೆ:<br>(ರೂ. ಲಕ್ಷಗಳಲ್ಲಿ)
<table>
<tr><th>ಕ್ರ. ಸಂ.</th><th>ಸಂಸ್ಥೆಯ ಹೆಸರು</th><th>ಬಿಡುಗಡೆಯಾದ ಅನುದಾನ</th></tr>
<tr><td>1</td><td>ಜವಾಹರ್ ಲಾಲ್ ನೆಹರು ತಾರಾಲಯ, ಬೆಂಗಳೂರು</td><td>300.00</td></tr>
<tr><td>2</td><td>ಸ್ವಾಮಿ ವಿವೇಕಾನಂದ ತಾರಾಲಯ, ಮಂಗಳೂರು</td><td>300.00</td></tr>
<tr><td>3</td><td>ಗದಗ ತಾರಾಲಯ</td><td>30.00</td></tr>
</table></td></tr>
<tr><td>ಉ)</td><td>ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಕೇಂದ್ರ ಸರ್ಕಾರ ವಾರ್ಷಿಕವಾಗಿ ನೀಡುತ್ತಿರುವ ಅನುದಾನವೆಷ್ಟು: 2012 ರಿಂದ ಇಲ್ಲಿಯವರೆಗೆ ಕೇಂದ್ರ ಸರ್ಕಾರ ಎಷ್ಟು ಅನುದಾನ/ಸಹಾಯಧನ ನೀಡಿದೆ? (ವಿವರಗಳನ್ನು ಒದಗಿಸುವುದು)</td><td>ಧಾರವಾಡದ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಕೇಂದ್ರ ಸರ್ಕಾರದಿಂದ ವಾರ್ಷಿಕವಾಗಿ ಅನುದಾನ ನೀಡುತ್ತಿರುವುದಿಲ್ಲ.<br><br>ಆದರೆ, ಸದರಿ ವಿಜ್ಞಾನ ಕೇಂದ್ರದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದೊಂದಿಗೆ ಒಟ್ಟು ರೂ.1.80 ಕೋಟಿಗಳ ವೆಚ್ಚದಲ್ಲಿ 'ಇನೋವೇಷನ್ ಹಬ್' ಸ್ಥಾಪಿಸಲಾಗುತ್ತಿದೆ.<br><br>ಸದರಿ ಇನೋವೇಷನ್ ಹಬ್ ಸ್ಥಾಪನೆಗೆ ಕೇಂದ್ರ ಸರ್ಕಾರದ ಪಾಲಿನ ಮೊತ್ತ ರೂ.90.00 ಲಕ್ಷಗಳಲ್ಲಿ, ಪ್ರಸ್ತುತದವರೆಗೆ 3 ಕಂತುಗಳ ಮೊತ್ತವಾಗಿ ರೂ.78.19 ಲಕ್ಷಗಳ ಅನುದಾನವು ಬಿಡುಗಡೆಯಾಗಿರುತ್ತದೆ.</td></tr>
</table>

**ಐಟಿಬಿಟಿ 32 ಎಸ್ ಟಿಎಸ್ 2026**

ಎನ್.ಎಸ್. ಬೋಸರಾಜು
ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

(ಎನ್.ಎಸ್.ಬೋಸರಾಜು)
ಮಾನ್ಯ ಸಣ್ಣ ನೀರಾವರಿ ಹಾಗೂ
ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.

ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ **355**ಗೆ ನೀಡಲಾದ ಉತ್ತರಕ್ಕೆ ಅನುಬಂಧ

**ಕಳೆದ ಮೂರು ವರ್ಷಗಳಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ಮಾಹಿತಿಯನ್ನು ಪ್ರಸಾರ ಮಾಡುವ ಮತ್ತು ವೈಜ್ಞಾನಿಕ ಅರಿವನ್ನು ಮೂಡಿಸುವ ನಿಟ್ಟಿನಲ್ಲಿಈ ಕೆಳಕಂಡ ಕಾರ್ಯಕ್ರಮಗಳನ್ನು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಆಯೋಜಿಸಲಾಗಿರುತ್ತದೆ:**

1. **ವಿಜ್ಞಾನ ಕೇಂದ್ರಗಳು:** ವಿಜ್ಞಾನವನ್ನು ಜನ ಸಾಮಾನ್ಯರೆಡೆಗೆ ಕೊಂಡೊಯ್ದು, ಜನರಿಗೆ ವಿಜ್ಞಾನದ ಅರಿವನ್ನು ಮೂಡಿಸುವ ದೂರದೃಷ್ಠಿಯೊಂದಿಗೆ ಹಾಗೂ ರಾಜ್ಯಾದ್ಯಂತ ವಿಜ್ಞಾನ ಮತ್ತು ತಂತ್ರಜ್ಞಾನದ ಬೆಳವಣಿಗೆಗಳನ್ನು ಪ್ರಚುರಪಡಿಸಲು ರಾಜ್ಯ ಸರ್ಕಾರದ ಸಂಪೂರ್ಣ ಅನುದಾನದೊಂದಿಗೆ, ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ವಿವಿಧ ಹಂತಗಳಲ್ಲಿ ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ.

   ಪ್ರಸ್ತುತ, ಧಾರವಾಡ ಮತ್ತು ದಕ್ಷಿಣ ಕನ್ನಡ (ಮಂಗಳೂರು) ಜಿಲ್ಲೆಗಳಲ್ಲಿ ಪ್ರಾದೇಶಿಕ ವಿಜ್ಞಾನ ಕೇಂದ್ರಗಳು ಮತ್ತು ರಾಯಚೂರು, ಬಳ್ಳಾರಿ, ಬೀದರ್, ಕಾರವಾರ ಮತ್ತು ಬಾಗಲಕೋಟೆ, ಚಿಕ್ಕಬಳ್ಳಾಪುರ, ದಾವಣಗೆರೆ, ಕೊಪ್ಪಳ ಮತ್ತು ಹಾವೇರಿ ಜಿಲ್ಲೆಗಳಲ್ಲಿ ವಿಜ್ಞಾನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಸದರಿ ವಿಜ್ಞಾನ ಕೇಂದ್ರಗಳ ಮೂಲಕ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಜನಸಾಮಾನ್ಯರಿಗೆ ಅರಿವು ಮೂಡಿಸುವ ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

2. **ತಾರಾಲಯಗಳು:** ಖಗೋಳ ಶಾಸ್ತ್ರ ಸಂಬಂಧಿತ ಶಿಕ್ಷಣದ ಪರಿಕಲ್ಪನೆಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ, ನಕ್ಷತ್ರ ಮತ್ತು ಗ್ರಹಗಳನ್ನು ಹೊಂದಿದ ರಾತ್ರಿ ಆಕಾಶದ ನೋಟವನ್ನು ವೀಕ್ಷಿಸಲು ತಾರಾಲಯಗಳನ್ನು ಸ್ಥಾಪಿಸಲಾಗಿದೆ. ಪ್ರಸ್ತುತ ಜವಾಹರ್‌ಲಾಲ್ ನೆಹರು ತಾರಾಲಯ, ಬೆಂಗಳೂರು, ಸ್ವಾಮಿ ವಿವೇಕಾನಂದ ತಾರಾಲಯ, ಮಂಗಳೂರು ಮತ್ತು ಗದಗ ತಾರಾಲಯಗಳ ಮೂಲಕ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.

3. **ಸಂಚಾರಿ ಡಿಜಿಟಲ್ ತಾರಾಲಯ ಯೋಜನೆ:** ಸಂಚಾರಿ ತಾರಾಲಯವು ರಾಜ್ಯದಲ್ಲಿನ ಸರ್ಕಾರಿ ಶಾಲೆ/ಕಾಲೇಜುಗಳಿಗೆ ತೆರಳಿ, ಶಾಲೆಯ ಅಂಗಳದಲ್ಲಿಯೇ ತಾರಾಲಯವನ್ನು ವೀಕ್ಷಿಸಲು, ವಿವಿಧ ಖಗೋಳ ವಿಜ್ಞಾನಕ್ಕೆ ಸಂಬಂಧಿಸಿದ ಪ್ರದರ್ಶನಗಳನ್ನು ಏರ್ಪಡಿಸಲಾಗುತ್ತಿದೆ.

4. **ಬೆಂಗಳೂರು ಇಂಡಿಯಾ ನ್ಯಾನೋ:** ರಾಜ್ಯದಲ್ಲಿ ನ್ಯಾನೊ ವಿಜ್ಞಾನ ಮತ್ತು ತಂತ್ರಜ್ಞಾನ ಆಧಾರಿತ ಸಂಸ್ಥೆಗಳನ್ನು ಉತ್ತೇಜಿಸಲು, 2007 ರಿಂದ ಎರಡು ವರ್ಷಗಳಿಗೊಮ್ಮೆ ಬೆಂಗಳೂರು ಇಂಡಿಯಾ ನ್ಯಾನೊ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ.

5. **ಡಿ.ಎಸ್.ಟಿ.-ಪಿಹೆಚ್.ಡಿ. ಶಿಷ್ಯವೇತನ ಯೋಜನೆ:** ವಿಜ್ಞಾನ ಮತ್ತು ಇಂಜಿನಿಯರಿಂಗ್ ವಿಷಯಗಳಲ್ಲಿ ಸಂಶೋಧನೆಯನ್ನು ಕೈಗೊಳ್ಳುತ್ತಿರುವ ಪಿಹೆಚ್.ಡಿ. ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಮಾಸಿಕ ರೂ.20,000/- ಗಳ ಶಿಷ್ಯವೇತನವನ್ನು 3 ವರ್ಷಗಳವರೆಗೆ ನೀಡಲಾಗುತ್ತಿದೆ.

**6. ವಿಜ್ಞಾನ ಮತ್ತು ತಂತ್ರಜ್ಞಾನ ದಾರ್ಶನಿಕ ಸಮೂಹ (ವಿತಂದಾಸ):** ವಿತಂದಾಸದ ವಿವಿಧ ಯೋಜನೆಗಳಡಿ ಪ್ರತಿ ವರ್ಷ ಆಯ್ಕೆಯಾಗುವ ವಿವಿಧ ಉನ್ನತ ಶಿಕ್ಷಣ ಸಂಸ್ಥೆ / ಸಂಶೋಧನಾ ಕೇಂದ್ರಗಳಿಗೆ ವೈಜ್ಞಾನಿಕ ಸಂಶೋಧನೆಯನ್ನು ಕೈಗೊಳ್ಳುವ ಸಲುವಾಗಿ ಅನುದಾನವನ್ನು ಒದಗಿಸಲಾಗುತ್ತಿದೆ.

**7. ವಿಜ್ಞಾನ ಗ್ಯಾಲರಿ ಬೆಂಗಳೂರು:** ರಾಜ್ಯದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯು ಅಂತಾರಾಷ್ಟ್ರೀಯ ವಿಜ್ಞಾನ ಗ್ಯಾಲರಿ ಡಬ್ಲಿನ್, ಐರ್ಲೆಂಡ್‌ನ ಸಹಯೋಗದೊಂದಿಗೆ ಸ್ಥಾಪಿಸಲಾಗಿರುವ ವಿಜ್ಞಾನ ಗ್ಯಾಲರಿ ಬೆಂಗಳೂರು ಸಂಸ್ಥೆಯು ವೈವಿಧ್ಯಮಯ ಹಿನ್ನೆಲೆಗಳ ಕಲಾವಿದರು ಮತ್ತು ವಿದ್ವಾಂಸರ ನೇತೃತ್ವದ ಸಂಶೋಧನಾ-ಆಧಾರಿತ ತೊಡಗಿಸಿಕೊಳ್ಳುವಿಕೆಗಳನ್ನು ಒಳಗೊಂಡಿರುವ ಅಂತರ್ ರಾಷ್ಟ್ರೀಯ ಪ್ರದರ್ಶನಗಳು, ಕಾರ್ಯಕ್ರಮಗಳು ಮತ್ತು ಸಾರ್ವಜನಿಕ ಕಾರ್ಯಕ್ರಮಗಳಿಂದ ನಿರಂತರವಾಗಿ ಬದಲಾಗುತ್ತಿರುವ ಸಂಶೋಧನಾ ಚಟುವಟಿಕೆಗಳನ್ನು ವಿದ್ಯಾರ್ಥಿಗಳು, ಯುವಪೀಳಿಗೆ ಮತ್ತು ಜನಸಾಮಾನ್ಯರಿಗೆ ವಿವಿಧ ಪ್ರದರ್ಶನಗಳನ್ನು ನೀಡಲಾಗುತ್ತಿದೆ.

**8. ವಿಜ್ಞಾನ ಪ್ರತಿಭಾ ಶೋಧನೆ ಯೋಜನೆ:** ಪದವಿ ಪೂರ್ವ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪೋಷಿಸುವ ಉದ್ದೇಶದಿಂದ 'ವಿಜ್ಞಾನ ಪ್ರತಿಭಾ ಶೋಧನೆ' ಯೋಜನೆಯಲ್ಲಿ ಎಸ್.ಎಸ್.ಎಲ್.ಸಿ. ಯಲ್ಲಿ ಹೆಚ್ಚು ಅಂಕ ಪಡೆದು ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಾಸಿಕ ಶಿಷ್ಯವೇತನವಾಗಿ ರೂ. 1000/-ಗಳನ್ನು ನೀಡಲಾಗುತ್ತಿದೆ.

**9. ರಾಷ್ಟ್ರೀಯ ವಿಜ್ಞಾನ ದಿನಾಚರಣೆ:** ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಜನಸಾಮಾನ್ಯರಲ್ಲಿ ವೈಜ್ಞಾನಿಕ ಅರಿವು ಮೂಡಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸಲಾಗಿರುತ್ತದೆ.

**10. ದೂರದರ್ಶಕಗಳ ವಿತರಣೆ:** ರಾತ್ರಿ ಆಕಾಶ ವೀಕ್ಷಣೆ ಮತ್ತು ಆಕಾಶ ಕಾಯಗಳ ಕುರಿತು ಆಸಕ್ತಿ ಮೂಡಿಸಲು ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಯ ಅಡಿ ಬರುವ ಒಟ್ಟು 833 ವಸತಿ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ತಲಾ ಒಂದು ದೂರದರ್ಶಕವನ್ನು ಒದಗಿಸಲಾಗಿದೆ.

**11. ಕ್ವಾಂಟಮ್ ಇಂಡಿಯಾ ಬೆಂಗಳೂರು:** ಕ್ವಾಂಟಮ್ ಟೆಕ್ನಾಲಜಿಯು ಜಾಗತಿಕವಾಗಿ ತ್ವರಿತ ಗತಿಯಲ್ಲಿ ಮುನ್ನಡೆಯುತ್ತಿದೆ. ಕ್ರಿಪ್ಟೋಗ್ರಫಿ, ಹಣಕಾಸು ಮತ್ತು ವಸ್ತು ವಿಜ್ಞಾನದಂತಹ ಕ್ಷೇತ್ರಗಳ ಮೇಲೆ ಪ್ರಭಾವ ಬೀರುವ ಕ್ಲಾಸಿಕಲ್ ಕಂಪ್ಯೂಟರ್ ಗಳಿಗಿಂತ ಹೆಚ್ಚು ವೇಗವಾಗಿ ಸಂಕೀರ್ಣ ಸಮಸ್ಯೆಗಳನ್ನು ಪರಿಹರಿಸುವ ಮೂಲಕ ಕ್ವಾಂಟಮ್ ಟೆಕ್ನಾಲಜಿ ಕ್ಷೇತ್ರವು ಕಂಪ್ಯೂಟಿಂಗ್ ನಲ್ಲಿ ಕ್ರಾಂತಿಯನ್ನುಂಟು ಮಾಡುವ ಸಾಧ್ಯತೆಯಿದೆ. ಸದರಿ ಕ್ಷೇತ್ರದ ಕುರಿತು ರಾಜ್ಯದ ಜನತೆಗೆ ಹೆಚ್ಚಿನ ಅರಿವನ್ನು ಮೂಡಿಸಲು ಬೆಂಗಳೂರು ಇಂಡಿಯಾ ಕ್ವಾಂಟಮ್ ಅಂತರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗಿದೆ.

**12. ಗಗನಯಾತ್ರಿ-ವಿದ್ಯಾರ್ಥಿ ಸಂವಾದ ಕಾರ್ಯಕ್ರಮ:** ಭಾರತೀಯ ಗಗನಯಾತ್ರಿ ಮತ್ತು ಬಾಹ್ಯಾಕಾಶಕ್ಕೆ ಪ್ರಯಾಣಿಸಿದ ಎರಡನೇ ಭಾರತೀಯ ಗ್ರೂಪ್ ಕ್ಯಾಪ್ಟನ್ ಶುಭಾಂಶು ಶುಕ್ಲಾ ರವರು ವಿದ್ಯಾರ್ಥಿಗಳೊಂದಿಗೆ ನೇರಸಂವಾದದ ಮೂಲಕ ಬಾಹ್ಯಾಕಾಶ ವಿಜ್ಞಾನ, ಮಾನವ ಬಾಹ್ಯಾಕಾಶ ಹಾರಾಟ ಮತ್ತು ಬಾಹ್ಯಾಕಾಶ ಸಂಶೋಧನಾ ಕ್ಷೇತ್ರದಲ್ಲಿ ಉದಯೋನ್ಮುಖ ಅವಕಾಶಗಳ ಬಗ್ಗೆ ಸಂವಾದದ ಮೂಲಕ ವಿದ್ಯಾರ್ಥಿಗಳನ್ನು ಪ್ರೇರೇಪಿಸಿ, ವೈಜ್ಞಾನಿಕ ದೃಷ್ಟಿಕೋನವನ್ನು ವಿಸ್ತರಿಸಲು ಮತ್ತು STEM ವಿಷಯಗಳಲ್ಲಿ ಕುತೂಹಲ ಮತ್ತು ಆಸಕ್ತಿಯನ್ನು ಬೆಳೆಸಲು ಸಹಕಾರಿಯಾಯಿತು.

**13. ರಾಜ್ಯ ಮಟ್ಟದ ರಸಪ್ರಶ್ನೆ ಮತ್ತು ಪ್ರಬಂಧ ಸ್ಪರ್ಧೆ:** ಪ್ರೌಢಶಾಲಾ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಉತ್ತೇಜಿಸಲು ಹಾಗೂ ವಿಜ್ಞಾನ ಮತು ತಂತ್ರಜ್ಞಾನದ ಕುರಿತು ಆಸಕ್ತಿಯನ್ನು ಬೆಳೆಸಲು ಕನ್ನಡದಲ್ಲಿ ರಾಜ್ಯ ಮಟ್ಟದ ವಿಜ್ಞಾನ ಮತ್ತು ತಂತ್ರಜ್ಞಾನ ರಸಪ್ರಶ್ನೆ ಕಾರ್ಯಕ್ರಮ ಮತ್ತು ಪ್ರಬಂಧ ಸ್ಪರ್ಧೆ ಕಾರ್ಯಕ್ರಮವನ್ನು ರಾಜ್ಯಾದ್ಯಾಂತ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಯಶಸ್ವಿಯಾಗಿ ಆಯೋಜಿಸಲಾಗಿದೆ.

**14. ವಿಜ್ಞಾನ ಜನಸಮೂಹ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳು:** ರಾಜ್ಯದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿನ ಬೆಳವಣಿಗೆಗಳನ್ನು ಜನಸಾಮಾನ್ಯರಿಗೆ ಹಾಗೂ ವಿದ್ಯಾರ್ಥಿಗಳಿಗೆ ತಲುಪಿಸಲು ಅನುವಾಗುವಂತೆ, ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಯೋಗಾಲಯ ಆಧಾರಿತ ತರಗತಿಗಳು, ಸಂಶೋಧನೆ-ಆಧಾರಿತ ಶಿಕ್ಷಣ ಕಾರ್ಯಕ್ರಮಗಳು, ಆಕಾಶ ಮತ್ತು ಖಗೋಳ ವಿದ್ಯಮಾನಗಳ ವೀಕ್ಷಣೆ, ಉಪನ್ಯಾಸ ಸರಣಿಗಳು, ವೆಬಿನಾರ್ ಗಳು, ವಿಜ್ಞಾನ ಸಂವಹನಕಾರರಿಗೆ ವಿಶೇಷ ಕಾರ್ಯಾಗಾರ, ವಿಜ್ಞಾನ ಕಿಟ್‌ಗಳ ವಿನ್ಯಾಸ ಮತ್ತು ತಯಾರಿಕೆ, ವಿಜ್ಞಾನ ನಾಟಕ, ರಸಪ್ರಶ್ನೆ ಮತ್ತು ಇತರೆ ಅನೇಕ ಜನಪ್ರಿಯ ಕಾರ್ಯಕ್ರಮಗಳನ್ನು ಇಲಾಖೆಯ ಅಂಗಸಂಸ್ಥೆಗಳು ಮತ್ತು ವಿಜ್ಞಾನ ಕೇಂದ್ರಗಳ ಮೂಲಕ ಆಯೋಜಿಸಲಾಗುತ್ತಿದೆ.